ಹಂಪೆಯ ರಸ್ತೆಯನ್ನು ದುರಸ್ತಿಗೊಳಿಸುವ ಬಗ್ಗೆ

2162: ಶ್ರೀ ಹೆಚ್.ನೈ. ಮೇಟಿ (ಗುಳೇದಗುಡ್ಡ):– ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹೊಸಪೇಟೆಯಿಂದ ಹಂಪಿಗೆ ಹೋಗುವ ರಸ್ತೆಯು ಹಾದುರಸ್ತಿ ಇರುವುದರಿಂದಾಗಿ ವಾಹನಗಳ ಓಡಾಟಕ್ಕೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ರಸ್ತೆಯನ್ನು ದುರಸ್ತಿ ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೇ;

ಇ) ಮೇಲ್ಕಂಡ ರಸ್ತೆಯನ್ನು ದುರಸ್ತಿ ಮಾಡದೆ ಇರಲು ಕಾರಣಗಳೇನು ಹಾಗೂ ಇದಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಕೆ. ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):–

ಅ) 1991–92 ಹಾಗೂ 92–93ರಲ್ಲಿ ಆದ ಅತಿವೃಷ್ಟಿಯಿಂದ ಹೊಸಪೇಟೆ – ಕಮಲಾಪೂರ – ಹಂಪೆ ರಸ್ತೆಯು ಕೆಟ್ಟು ವಾಹನ ಸಂಚಾರಕ್ಕೆ ತೊಂದರೆಯಾಗಿದ್ದುದು ಸರ್ಕಾರದ ಗಮನಕ್ಕೆ ಬಂದಿದೆ. ಪ್ರಸ್ತುತದಲ್ಲಿ ವಾಹನ ಸಂಚಾರಕ್ಕೆ ತೊಂದರೆಯಿರುವುದಿಲ್ಲ.

ಆ) 1991–92 ಹಾಗೂ 1992–93ನೇ ಸಾಲಿನಲ್ಲಿ ಅತಿವೃಷ್ಟಿಯಿಂದ ಕೆಟ್ಟಿದ್ದ ಹೊಸಪೇಟೆ – ಕಮಲಾಪುರ ಭಾಗದ ರಸ್ತೆಯನ್ನು 6.80 ಲಕ್ಷರೂ.ಗಳ ಅತಿವೃಷ್ಟಿ ಪರಿಹಾರ ಅನುದಾನದಿಂದ ದುರಸ್ತಿಪಡಿಸಲಾಗುತ್ತಿದೆ. ಹಾಗೂ ಕಮಲಾಪುರದಿಂದ ಹಂಪಿಯ ಭಾಗದ ರಸ್ತೆಯ ಅಭಿವೃದ್ಧಿಯನ್ನು 18 ಲಕ್ಷ ರೂ.ಗಳ ಅಂದಾಜಿನಲ್ಲಿ ಪೂರ್ಣಗೊಳಿಸಲಾಗಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಮಂಡ್ಯ ಕೆರೆಯನ್ನು ನಿವೇಶನವನ್ನಾಗಿ ಮಾರ್ಪಡಿಸುವ ಬಗ್ಗೆ

2229: ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ):– ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮಂಡ್ಯ ಕೆರೆಯನ್ನು ಒಡೆದು ನಿವೇಶನಗಳನ್ನಾಗಿ ಮಾರ್ಪಡಿಸುವ ಕಾಮಗಾರಿಯನ್ನು ಸರ್ಕಾರವು ಕೈಗೊಂಡಿದೆಯೇ;

ಆ) ಹಾಗಿದ್ದಲ್ಲಿ ಈವರೆಗೆ ಪ್ರಗತಿ ಸಾಧಿಸಿರುವುದು ಎಷ್ಟು;

ಇ) ಪ್ರಸಕ್ತ ಸಾಲಿನಲ್ಲಿ ಈ ಕಾಮಗಾರಿಗೆ ಒದಗಿಸಿರುವ ಹಣವೆಷ್ಟು ?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯ ಮಂತ್ರಿಗಳು):–

ಅ) ಹೌದು.

ಆ) ಕೆರೆಯನ್ನು ಒಡೆಯುವ ಪೂರ್ವಭಾವಿಯಾಗಿ ಮಂಡ್ಯ ಕೆರೆಯ ಅಚ್ಚುಕಟ್ಟಿನ ಪ್ರದೇಶಕ್ಕೆ ನೀರನ್ನು ಸರಬರಾಜು ಮಾಡಲು ಹಾಗೂ ಮಂಡ್ಯ ಸಕ್ಕರೆ ಕಾರ್ಖಾನೆಗೆ ಪರ್ಯಾಯ ನೀರು ಸರಬರಾಜು ಮಾಡಲು ಮಂಡ್ಯ ಕೆರೆಯ ಮೇಲ್ಭಾಗದ ಕೆರೆಗಳನ್ನು ಅಭಿವೃದ್ಧಿಪಡಿಸುವ ಮೊದಲ ಹಂತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.